# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 580 |
| ಸದಸ್ಯರ ಹೆಸರು | : | ಶ್ರೀ ಎಸ್.ಎಲ್. ಭೋಜೇಗೌಡ<br>(ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 11.07.2023 |
| ಉತ್ತರಿಸುವ ಸಚಿವರು | : | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಸರ್ಕಾರದಿಂದ ಸಣ್ಣ ಕೈಗಾರಿಕೆಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರವು ಯಾವ ರೀತಿಯ ಪ್ರೋತ್ಸಾಹವನ್ನು ನೀಡಿದೆ; | ರಾಜ್ಯ ಸರ್ಕಾರವು ಕರ್ನಾಟಕ ರಾಜ್ಯದಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಅಭಿವೃದ್ಧಿಗೆ ಈ ಕೆಳಗಿನ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದೆ ಮತ್ತು ಪ್ರೋತ್ಸಾಹಗಳನ್ನು ನೀಡುತ್ತಿದೆ.<br><br>1. ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ಪಾದನಾ ಘಟಕಗಳಿಗೆ ಗರಿಷ್ಠ ಸಾಲ ರೂ. 50 ಲಕ್ಷಗಳವರೆಗೆ ಸೇವಾ ಘಟಕಗಳಿಗೆ ರೂ.20 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 15 ರಿಂದ ಶೇ.35 ರವರೆಗೆ ಗರಿಷ್ಠ ರೂ.7.50 ಲಕ್ಷದಿಂದ ರೂ.17.50 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br><br>2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ, ಮತ್ತು ಸಣ್ಣ ಕೈಗಾರಿಕೆಗಳು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರುಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br><br>3. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಶೇ 75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ. ನಿವೇಶನದ ಗರಿಷ್ಠ ವಿಸ್ತೀರ್ಣ 2 ಎಕರೆಗಳು<br><br>4. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ 60 ರಷ್ಟು ಗರಿಷ್ಠ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br><br>5. ಪರಿಶಿಷ್ಟ ಜಾತಿಯ ಮತ್ತು ಪರಿಶಿಷ್ಟ ವರ್ಗದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಠ ರೂ.10.00 ಕೋಟಿ |

| | | |
|---|---|---|
| | | ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50ರಷ್ಟು ಬಡ್ಡಿ ರಹಿತ ಗರಿಷ್ಟ ರೂ.75 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ.<br><br>6. ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ 2020-25 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ.<br><br>1. ಮುದ್ರಾಂಕ ಶುಲ್ಕ ವಿನಾಯಿತಿ<br>2. ನೋಂದಣಿ ಶುಲ್ಕ ರಿಯಾಯಿತಿ.<br>3. ಬಂಡವಾಳ ಹೂಡಿಕೆ ಸಹಾಯಧನ<br>4. ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ<br>5. ಭೂಪರಿವರ್ತನಾ ಶುಲ್ಕ ಮರುಪಾವತಿ.<br>6. ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿ.<br>7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ.<br>8. ವಿದ್ಯುತ್ ತೆರಿಗೆವಿನಾಯಿತಿ<br>9. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಸಹಾಯಧನ<br>10. ಮಳೆ ನೀರುಕೊಯ್ಲು / ಸಂರಕ್ಷಣೆ ಸಹಾಯಧನ<br>11. ತಂತ್ರಜ್ಞಾನ ಉನ್ನತೀಕರಣಕ್ಕೆ ಬಡ್ಡಿಸಹಾಯಧನ |
| ಆ) | ಸಣ್ಣ ಕೈಗಾರಿಕೆಗಳಿಗೆ ಸರ್ಕಾರ ನೀಡಿರುವ ಮೂಲ ಸೌಕರ್ಯಗಳು ಕಡಿಮೆಯಾಗಿರುವುದರಿಂದ ಈ ಕೈಗಾರಿಕೆಗಳ ಉತ್ತೇಜನಕ್ಕೆ ಸರ್ಕಾರ ಇನ್ನು ಹೆಚ್ಚಿನ ಸೌಕರ್ಯಗಳನ್ನು ಒದಗಿಸಲು ಯಾವ ಕ್ರಮವನ್ನು ಕೈಗೊಂಡಿದೆ? | ಕರ್ನಾಟಕ ಸರ್ಕಾರವು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮವು ಅಭಿವೃದ್ಧಿ ಪಡಿಸಿರುವ 190 ಕೈಗಾರಿಕಾ ವಸಾಹತುಗಳಲ್ಲಿ ಎಲ್ಲಾ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸಿ ನಂತರ ನಿವೇಶನಗಳನ್ನು ಉದ್ಯಮಶೀಲರಿಗೆ ಹಂಚಿಕೆಮಾಡುತ್ತದೆ. ಇದರಲ್ಲಿ ಯಾವುದೇ ಕೊರತೆ ಇರುವುದಿಲ್ಲ.<br><br>ಸರ್ಕಾರವು ಕಾಲಕಾಲಕ್ಕೆ ಕೈಗಾರಿಕಾ ವಸಾಹತುಗಳ ಮೂಲಸೌಕರ್ಯದ ಸ್ಥಿತಿಗತಿಗಳನ್ನು ಪರಿಶೀಲಿಸಿ ಕ್ರಿಟಿಕಲ್ ಮೂಲಸೌಲಭ್ಯ ಯೋಜನೆಯಡಿಯಲ್ಲಿ ಅವುಗಳನ್ನು ಅಭಿವೃದ್ಧಿಪಡಿಸುತ್ತದೆ.<br><br>**<u>1. ಮೂಲಭೂತ ಸೌಕರ್ಯ/ಅಭಿವೃದ್ಧಿ:</u>**<br><br>ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ 2015-16 ರಿಂದ 2022-23 ರ ಅವಧಿಯಲ್ಲಿ ನಿಗಮದ ಸ್ವಾಧೀನದಲ್ಲಿರುವ ಕೈಗಾರಿಕಾ ವಸಾಹತುಗಳನ್ನು ಮೇಲ್ದರ್ಜೆಗೇರಿಸುವ ಸಲುವಾಗಿ ವಸಾಹತುಗಳಲ್ಲಿ ಕ್ಲಿಷ್ಟಕರ ಮೂಲಸೌಕರ್ಯದ ಯೋಜನೆಯಡಿಯಲ್ಲಿ ಸರ್ಕಾರದ ಅನುದಾನ ಶೇಕಡ 75 ರಷ್ಟು ಹಾಗೂ ನಿಗಮದ ಬಂಡವಾಳ ಶೇಕಡ 25 ರಂತೆ ಸುಮಾರು 98 ಕೈಗಾರಿಕಾ ವಸಾಹತುಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿ/ಉನ್ನತೀಕರಣ ಕಾಮಗಾರಿಗಳಾದ ರಸ್ತೆ ಡಾಂಬರೀಕರಣ, ಒಳಚರಂಡಿ, ನೀರು ಸರಬರಾಜು, ಬೀದಿ ದೀಪ ಇತ್ಯಾದಿ ಸೌಕರ್ಯಗಳನ್ನು ಒದಗಿಸಲಾಗಿರುತ್ತದೆ. |

| | | |
|---|---|---|
| | | **2. ಮಾದರಿ ಮಳಿಗೆ ನಿರ್ಮಾಣ:**<br>2017-18 ರಿಂದ 2018-19ನೇ ಸಾಲಿನವರೆಗೆ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಕೆ.ಎಸ್.ಎಸ್.ಐ.ಡಿ.ಸಿ. ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಸಣ್ಣ ಕೈಗಾರಿಕೆಗಳ ಸ್ಥಾಪನೆಗೆ ಮಾದರಿ ನಿವೇಶನಗಳನ್ನು ಹಂಚಿಕೆ ಮಾಡುತ್ತಿದ್ದು ನಿವೇಶನಗಳಿಗೆ ಶೇಕಡ 75 ರಂತೆ ಸರ್ಕಾರದಿಂದ ರಿಯಾಯಿತಿ ನೀಡಲಾಗುತ್ತಿದೆ. ಮುಂದುವರೆದು "ಸಿ" ಮತ್ತು "ಡಿ" ಮಾದರಿ ಮಳಿಗೆಗಳನ್ನು ಶೇಕಡ 90ರ ಸರ್ಕಾರದ ಅನುದಾನದಲ್ಲಿ ಮತ್ತು ಶೇಕಡ 10ರ ನಿಗಮದ ವಂತಿಕೆಯಿಂದ ನಿರ್ಮಾಣ ಮಾಡಿ ರಿಯಾಯಿತಿ ದರದಲ್ಲಿ ಹಂಚಿಕೆ ಮಾಡಲಾಗುತ್ತಿದೆ, ಇದುವರೆಗೆ 150 "ಸಿ" ಮತ್ತು 150 "ಡಿ" ಮಾದರಿ ಮಳಿಗೆಗಳನ್ನು ಹಂಚಿಕೆ ಮಾಡಿ ಕೈಗಾರಿಕೋದ್ಯಮಿಗಳಿಗೆ ಉತ್ತೇಜನ ನೀಡಲಾಗಿದೆ. |

ಸಿಐ 130 ಸಿಎಸ್‌ಸಿ 2023

**(ಶರಣಬಸಪ್ಪ ದರ್ಶನಾಪೂರ)**
ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು.